# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 67(ಹಳೆಯ ಸಂಖ್ಯೆ-19),
ಸಂಜಯನಗರ. ಬೆಂಗಳೂರು.

ಸಂಖ್ಯೆ: ಸ.ಅ/ವಾ-67(ಹಳೆಯ ಸಂಖ್ಯೆ-19)/ಪಿ.ಆರ್/ /2022-23 ದಿನಾಂಕ:-03-09-2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/2020-21 ದಿನಾಂಕ:-21-09-2020. ರವರ ಆದೇಶದಂತೆ ದಿನಾಂಕ:-03-09-2022 ರಂದು ವಾರ್ಡ್ ನಂ: 67(ಹಳೆಯ ಸಂಖ್ಯೆ-19) ಸಂಜಯನಗರ ಸೆಂಟ್ರಲ್ ಎಕ್ಸೈಜ್ ಲೇಔಟ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

::ಸಭೆಗೆ ಹಾಜರಾಗಿದ್ದವರ ವಿವರಗಳು::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಷರಾ |
|---|---|---|---|
| 1. | ಶ್ರೀಮತಿ. ಜ್ಯೋತಿ.ಜಿ ಚೌಳೂಲ್ಕರ್ ಸ.ಕಾ.ನಿ (ಘ.ತ್ಯಾ.ನಿ) ಪುಲಿಕೇಶಿ ನಗರ ವಿಭಾಗ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು | |
| 2. | ಶ್ರೀ. ನವನಾಥ್ | ಸದಸ್ಯ ಕಾರ್ಯದರ್ಶಿ ಮತ್ತು ಸಹಾಯಕ ಅಭಿಯಂತರರು ವಾರ್ಡ್ ನಂ: 67(ಹಳೆಯ ಸಂಖ್ಯೆ-19) | |
| 3. | ಶ್ರೀ. ಸಲ್ಮಾನ್ | ಹಿರಿಯ ಆರೋಗ್ಯ ಪರಿವೀಕ್ಷಕರು. | |
| 4. | ವಾಟರ್ ಇನ್ಸ್‌ಪೆಕ್ಟರ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಂಜಯನಗರ | |
| 5. | ತೋಟಗಾರಿಕಾ ಇನ್ಸ್‌ಪೆಕ್ಟರ್ | ತೋಟಗಾರಿಕಾ ಇಲಾಖೆ. | |
| 6. | ಪೋಲೀಸ್ ಅಧಿಕಾರಿಗಳು | ಸಂಜಯನಗರ ಪೋಲೀಸ್ ಠಾಣೆ | |
| 7. | ಸಂಚಾರಿ ಪೋಲೀಸ್ ಅಧಿಕಾರಿಗಳು | ಸಂಚಾರಿ ಪೋಲೀಸ್ ಠಾಣೆ, ಆರ್.ಟಿ ನಗರ. | |
| 8. | ಬೀದಿ ದೀಪ ನಿರ್ವಾಹಕರು | Street light Incharge, B B M P. | |
| 9. | ಶ್ರೀಮತಿ ಬಿ.ಆರ್.ಚಂದ್ರಿಕಾ | ಪಶುಸಂಗೋಪನೆ ಇಲಾಖೆ | |
| 10. | ಶ್ರೀ.ಪ್ರಕಾಶ್, ಮಾರುತಿ ರಾವ್ ಮತ್ತು ಇತರರು | ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು | |

ವಾರ್ಡ್ ಕಾರ್ಯದರ್ಶಿಗಳಾದ ಶ್ರೀ.ನವನಾಥ್, ಸಹಾಯಕ ಅಭಿಯಂತರರು ರವರು ಸಭೆಗೆ ಹಾಜರಾದ ಅಧ್ಯಕ್ಷರು, ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀಮತಿ ಜ್ಯೋತಿ.ಜಿ ಚೋಳೂಲ್ಕರ್ ರವರಿಗೆ ಮತ್ತು ಸಭೆಯಲ್ಲಿ ಸೇರಿದ ಸಾರ್ವಜನಿಕರಿಗೆ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

**ಘನತ್ಯಾಜ್ಯ ನಿರ್ವಹಣೆ:-**

1. ಸೆಂಟ್ರಲ್ ಎಕ್ಸೈಜ್ ಲೇಔಟ್‌ನಲ್ಲಿ ಘನತ್ಯಾಜ್ಯ ಸಂಗ್ರಹಣಾ ವಾಹನವು ಮೂರು ದಿವಸಗಳಿಗೊಮ್ಮೆ ಬರುತ್ತಿದ್ದು, ದಿನನಿತ್ಯ ಘನತ್ಯಾಜ್ಯ ಸಂಗ್ರಹಣೆ ಮಾಡಬೇಕೆಂದು ಸಾರ್ವಜನಿಕರು ಕೋರಿದರು. ಅದರಂತೆ ಪ್ರತಿ ನಿತ್ಯ ಘನತ್ಯಾಜ್ಯ ಸಂಗ್ರಹಣೆ ಮಾಡಿ, ದಿನಚರಿ ವಹಿಯನ್ನು ನಿರ್ವಹಿಸಿ ಸಾರ್ವಜನಿಕರಿಂದ ಸಹಿ ಪಡೆಯಬೇಕಾಗಿ ಘನತ್ಯಾಜ್ಯ ನಿರ್ವಹಣಾ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.
2. ವಾರ್ಡ್‌ನಲ್ಲಿ ಹೆಚ್ಚು ಒಣ ಎಲೆಗಳು ಬೀಳುತ್ತಿರುವುದರಿಂದ ಲೀಫ್ ಕಾಂಪೋಸ್ಟರ್‌ಗಳನ್ನು ಅಳವಡಿಸಲು ಸೂಕ್ತ ಜಾಗಗಳನ್ನು ಗುರುತಿಸಿ ಕಡತವನ್ನು ಮಂಡಿಸಿದ ಪ್ರತಿಯನ್ನು ಮುಂದಿನ ಸಭೆಗೆ ಹಾಜರುಪಡಿಸಲು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

Scanned with CamScanner

**ಬೀದಿ ದೀಪಗಳ ನಿರ್ವಹಣೆ:–**

1. ಬೀದಿ ದೀಪಗಳಿಗೆ ಆಟೋಮ್ಯಾಟಿಕ್ ಸ್ವಿಚ್‌ಗಳು ಕಡ್ಡಾಯವಾಗಿ ಇದೆಯೋ? ಇಲ್ಲವೋ? ಎನ್ನುವುದರ ಬಗ್ಗೆ ಮಾಹಿತಿ ನೀಡಲು ಸಾರ್ವಜನಿಕರು ಕೋರಿದರು. ಬೀದಿ ದೀಪಗಳ ನಿರ್ವಹಣೆಯ ಅಧಿಕಾರಿಗಳು ಸಭೆಗೆ ಹಾಜರಾಗದೇ ಇರುವುದರಿಂದ ಮಾಹಿತಿ ನೀಡಲು ಸಾಧ್ಯವಾಗದಿರುವ ಬಗ್ಗೆ ನೋಡಲ್ ಅಧಿಕಾರಿಗಳು ವಿಷಾದ ವ್ಯಕ್ತ ಪಡಿಸಿ ಬೀದಿ ದೀಪಗಳ ನಿರ್ವಹಣಾ ಅಧಿಕಾರಿಗಳಿಗೆ ಸಭೆಗೆ ಹಾಜರಾಗದೇ ಇರುವುದರ ಬಗ್ಗೆ ನೋಟೀಸ್ ನೀಡಲು ಸೂಚಿಸಿದರು.

**ಬೃಹತ್ ನೀರು ಕಾಲುವೆ:–**

1. ಬೃಹತ್ ನೀರು ಕಾಲುವೆ ನಿರ್ವಹಣೆ ಮಾಡುವ ಅಧಿಕಾರಿಗಳು ಮುಂದಿನ ಸಭೆಗೆ ಕಡ್ಡಾಯವಾಗಿ ಹಾಜರಾಗಬೇಕಾಗಿ ತಿಳಿಸಿದರು.

**ಆರೋಗ್ಯ ಇಲಾಖೆ:–**

1. ವಾರ್ಡ್‌ನಲ್ಲಿ ಪ್ಲಾಸ್ಟಿಕ್ ಬಳಕೆ ಹೆಚ್ಚಾಗುತ್ತಿರುವುದರ ಬಗ್ಗೆ ಸಾರ್ವಜನಿಕರು ದೂರಿದರು. ಮತ್ತು ಪಾದಚಾರಿ ಮಾರ್ಗಗಳ ಮೇಲೆ ತಿಂಡಿ ತಿನಿಸುಗಳನ್ನು ಇಡುವ ತಳ್ಳು ಗಾಡಿಗಳಿಂದ ಒತ್ತುವರಿ ಆಗುತ್ತಿರುವ ಬಗ್ಗೆಯೂ ಸಹ ಸಾರ್ವಜನಿಕರು ದೂರಿದರು, ಈ ಬಗ್ಗೆ ಬಿ.ಬಿ.ಎಂ.ಪಿ ಅಧಿಕಾರಿಗಳು, ಆರೋಗ್ಯ ಅಧಿಕಾರಿಗಳು ಮತ್ತು ಪೋಲೀಸ್ ಅಧಿಕಾರಿಗಳು ಜಂಟಿಯಾಗಿ ಸೇರಿ ಫುಟ್‌ಪಾತ್ ಡ್ರೈವ್ ಮಾಡಿ ಒತ್ತುವರಿಯನ್ನು ತೆರವುಗೊಳಿಸಲು ನೋಡಲ್ ಅಧಿಕಾರಿಗಳು ಸೂಚಿಸಿದರು.

**ಕಾಮಗಾರಿ ಇಲಾಖೆ:–**

1. ವಾರ್ಡ್‌ನ ಪೋಸ್ಟಲ್ ಕಾಲೋನಿ ಮತ್ತು ಭೂಪಸಂದ್ರ ಗ್ರಾಮಠಾಣಾದಲ್ಲಿ ರಸ್ತೆಗಳು ಹಾಳಾಗಿರುವ ಬಗ್ಗೆ ಸಾರ್ವಜನಿಕರು ದೂರಿದರು. ಈ ಬಗ್ಗೆ ಕ್ರಮ ಕೈಗೊಳ್ಳಲು ನೋಡಲ್ ಅಧಿಕಾರಿಗಳು ಬಿ.ಬಿ.ಎಂ.ಪಿ ಕಾಮಗಾರಿ ಅಭಿಯಂತರರಿಗೆ ಸೂಚಿಸಿದರು.

**ಕಂದಾಯ ಇಲಾಖೆ:–**

1. ಕಂದಾಯ ಇಲಾಖೆಯ ಅಧಿಕಾರಿಗಳಿಗೆ ಮುಂದಿನ ಸಭೆಗೆ ಕಡ್ಡಾಯವಾಗಿ ಹಾಜರಾಗಬೇಕಾಗಿ ತಿಳಿಸಿದರು. ಹಾಗೂ ವಾರ್ಡ್‌ನ ಗಡಿಯನ್ನು ಗುರುತಿಸುವುದು ಮತ್ತು ಮತದಾರರ ಗುರುತಿನ ಚೀಟಿಯನ್ನು ಪಾನ್‌ಕಾರ್ಡ್ ಜೊತೆ ಲಿಂಕ್ ಮಾಡುವ ಬಗ್ಗೆ ಜನರಿಗೆ ತಿಳುವಳಿಕೆ ನೀಡಲು ನೋಡಲ್ ಅಧಿಕಾರಿಗಳು ಸೂಚಿಸಿದರು

**ಉದ್ಯಾನವನ:–**

1. ವಾರ್ಡ್‌ನ ವಿನಾಯಕ ಲೇಔಟ್ ಪಾರ್ಕ್, ಸೆಂಟ್ರಲ್ ಎಕ್ಸೈಜ್ ಲೇಔಟ್ ಪಾರ್ಕ್ ಮತ್ತು ರಘುವನ ಪಾರ್ಕ್‌ಗಳ ಸಮರ್ಪಕವಾಗಿ ನಿರ್ವಹಣೆ ಮಾಡದಿರುವ ಬಗ್ಗೆ ಸಾರ್ವಜನಿಕರು ದೂರಿದರು. ಸದರಿ ವಿಷಯದ ಬಗ್ಗೆ ಕ್ರಮ ಕೈಗೊಳ್ಳಲು ತೋಟಗಾರಿಕಾ ಇಲಾಖೆಯ ಅಧಿಕಾರಿಗಳಿಗೆ ನೋಡಲ್ ಅದಿಕಾರಿಗಳು ಸೂಚಿಸಿದರು. ಪಾರ್ಕ್‌ನಲ್ಲಿ ಅಳವಡಿಸಿರುವ ಜಿಮ್ ಮತ್ತು ಮಕ್ಕಳು ಆಟ ಆಡುವ ಉಪಕರಣಗಳನ್ನು ಬಿ.ಬಿ.ಎಂ.ಪಿ ಯೋಜನಾ ವಿಭಾಗದವರು ನಿರ್ವಹಣೆ ಮಾಡಬೇಕಾಗಿದ್ದು, ಸದರಿ ಅದಿಕಾರಿಗಳು ಮುಂದಿನ ಸಭೆಯಲ್ಲಿ ಕಡ್ಡಾಯವಾಗಿ ಹಾಜರಿರುವಂತೆ ನೋಟೀಸ್ ನೀಡಲು ನೋಡಲ್ ಅಧಿಕಾರಿಗಳು ಸೂಚಿಸಿದರು.

**ಅರಣ್ಯ ಇಲಾಖೆ:–**

1. ವಾರ್ಡ್‌ನಲ್ಲಿ ಬರುವ ವಿನಾಯಕ ಲೇಔಟ್, ಆರ್.ಎಂ.ಎಸ್ ಲೇಔಟ್ ಮತ್ತು ಸೆಂಟ್ರಲ್ ಎಕ್ಸೈಜ್ ಲೇಔಟ್‌ನಲ್ಲಿ ಜೋತುಬಿದ್ದಿರುವ ಮರದ ಕೊಂಬೆಗಳನ್ನು ಕತ್ತರಿಸಲು ಅರಣ್ಯಾಧಿಕಾರಿಗಳಿಗೆ ಸೂಚಿಸುವಂತೆ ನೋಡಲ್ ಅಧಿಕಾರಿಗಳು ಬಿ.ಬಿ.ಎಂ.ಪಿ ಅಭಿಯಂತರರಿಗೆ ತಿಳಿಸಿದರು. ಅರಣ್ಯ ಇಲಾಖೆಯ ಅಧಿಕಾರಿಗಳು ಸಭೆಗೆ ಹಾಜರಾಗದಿರುವ ಬಗ್ಗೆ ವಿಷಾದ ವ್ಯಕ್ತ ಪಡಿಸಿ ಮುಂದಿನ ಸಭೆಗೆ ಕಡ್ಡಾಯವಾಗಿ ಹಾಜರಿರುವಂತೆ ಸೂಚಿಸಿದರು.

**ಪಶುಸಂಗೋಪನೆ:–**

1. ಪಶು ಸಂಗೋಪನಾಧಿಕಾರಿಗಳಿಗೆ ವಾರ್ಡ್‌ನಲ್ಲಿರುವ ಅನಧಿಕೃತ ಮಾಂಸ ಮಾರಾಟ ಮಳಿಗೆಗಳನ್ನು ಗುರುತಿಸಿ ತೆರವುಗೊಳಿಸಲು ಮತ್ತು ಮಾಂಸ ತ್ಯಾಜ್ಯ ನಿರ್ವಹಣೆ ಬಗ್ಗೆ ಗಮನ ಹರಿಸಲು ನೋಡಲ್ ಅಧಿಕಾರಿಗಳು ಸೂಚಿಸಿದರು.

**ಬಿ.ಡಬ್ಲ್ಯೂ.ಎಸ್.ಎಸ್.ಬಿ:–**

1. ವಾರ್ಡ್‌ನ 2ನೇ ಮುಖ್ಯರಸ್ತೆ ಪೋಸ್ಟಲ್ ಕಾಲೋನಿ ಸ್ಯಾನಿಟರಿ ಪೈಪ್‌ಲೈನ್‌ಗಳು ಬ್ಲಾಕ್ ಆಗಿ ಓವರ್ ಪ್ಲೋ ಆಗುತ್ತಿರುವ ಬಗ್ಗೆ, ಸೆಂಟ್ರಲ್ ಎಕ್ಸೈಜ್ ಲೇಔಟ್ 1ನೇ ಎ ಅಡ್ಡರಸ್ತೆಯಲ್ಲಿ ಮ್ಯಾನ್‌ಹೋಲ್ ಸಿಂಕ್ ಆಗಿರುವ ಬಗ್ಗೆ ಮತ್ತು ಸೆಂಟ್ರಲ್ ಎಕ್ಸೈಜ್ ಲೇಔಟ್‌ನ ಬೃಹತ್ ಮಳೆನೀರು ಕಾಲುವೆಗೆ ಕೊಳಚೆ ನೀರು ಸೇರುತ್ತಿರುವ ಬಗ್ಗೆ ಈಗಾಗಲೇ 10 ರಿಂದ 15

Scanned with CamScanner

ದಿವಸನಗಳ ಹಿಂದೆ ತಿಳಿಸಿದ್ದರೂ ಈ ಬಗ್ಗೆ ಕ್ರಮ ಕೈಗೊಂಡಿಲ್ಲವೆಂದು ಸಾರ್ವಜನಿಕರು ತಿಳಿಸಿದರು. ನೋಡಲ್ ಅಧಿಕಾರಿಗಳು ತುರ್ತಾಗಿ ಮೇಲಿನ ಸಮಸ್ಯೆಗಳನ್ನು ಬಗೆಹರಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸಿದರು.

2. ಮ್ಯಾನ್‌ಹೋಲ್ ಡಿಸಿಲ್ಟಿಂಗ್ ಪ್ಲಾನ್ ಅನ್ನು ಮುಂಚಿತವಾಗಿ ಸಾರ್ವಜನಿಕರಿಗೆ ವಾಟ್ಸ್ ಆಫ್ ಮುಖಾಂತರ ತಿಳಿಸಲು ಸೂಚಿಸಿದ್ದರು. ಅಲ್ಲದೆ ವಾರ್ಡ್‌ನ ಯು.ಎ.ಎಸ್ ಲೇಔಟ್, ಎನ್.ಜಿ.ಎಫ್ ಲೇಔಟ್ ಮತ್ತು ಭೂಪಸಂದ್ರ ಲೇಔಟ್‌ಗಳಲ್ಲಿ ಮ್ಯಾನ್‌ಹೋಲ್‌ಗಳು ತುಂಬಿ ಓವರ್ ಫ್ಲೋ ಆಗುತ್ತಿರುವ ಬಗ್ಗೆ ಸಾರ್ವಜನಿಕರು ದೂರಿದರು. ಈ ಸಮಸ್ಯೆಗಳ ಬಗ್ಗೆ ಗಮನಹರಿಸಿ ತುರ್ತಾಗಿ ಸಮಸ್ಯೆಗಳನ್ನು ನಿರ್ವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

3. ವಾರ್ಡ್‌ನ ಆರ್.ಎಂ.ಎಸ್ ಲೇಔಟ್ ನಲ್ಲಿ ವಾಟರ್ ಪ್ರೇಷರ್ ಸಮರ್ಪಕವಾಗಿ ಬರುತ್ತಿಲ್ಲವೆಂದು ಸಾರ್ವಜನಿಕರು ತಿಳಿಸಿದರು. ಈ ಬಗ್ಗೆ ಪರಿಶೀಲಿಸುವುದಾಗಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ತಿಳಿಸಿದರು.

**ಪೊಲೀಸ್/ಟ್ರಾಫಿಕ್:-**

1. ಸಂಜಯನಗರ ಸೆಂಟ್ರಲ್ ಎಕ್ಸೈಜ್ ಲೇಔಟ್ ರಸ್ತೆ ಮತ್ತು 4ನೇ ಎ ಕ್ರಾಸ್, ಟೆಲಿಫೋನ್ ಎಕ್ಸ್‌ಚೇಂಜ್ ಹತ್ತಿರ ಪುಂಡಪೋಕರಿಗಳಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಪೊಲೀಸ್ ಅಧಿಕಾರಿಗಳು ಸದರಿ ರಸ್ತೆಗಳಲ್ಲಿ ಬೀಟ್ ಹೊಡೆದು ಕ್ರಮ ವಹಿಸುವಂತೆ ನೋಡಲ್ ಅಧಿಕಾರಿಗಳು ಸೂಚಿಸಿದರು. ಉಡುಪಿ ಹೋಟೆಲ್ ಹತ್ತಿರ ಸಾರ್ವಜನಿಕರು ಪಾರ್ಸೆಲ್ ತೆಗೆದುಕೊಳ್ಳಲು ತಮ್ಮ ವಾಹನಗಳನ್ನು ಮುಖ್ಯರಸ್ತೆಯ ಮೇಲೆ ನಿಲ್ಲಿಸಿ ಹೋಗುವುದರಿಂದ ಟ್ರಾಫಿಕ್ ಸಮಸ್ಯೆ ಉಂಟಾಗುತ್ತಿದ್ದು, ಈ ಬಗ್ಗೆ ಟ್ರಾಫಿಕ್ ಪೊಲೀಸ್ ರವರು ಗಮನ ಹರಿಸಬೇಕಾಗಿ ನೋಡಲ್ ಅಧಿಕಾರಿಗಳು ಸೂಚಿಸಿದರು.

**ಬೆಸ್ಕಾಂ:-**

1. ವಾರ್ಡ್‌ನಲ್ಲಿ ಬೆಸ್ಕಾಂ ನಿಂದ ಯು.ಜಿ ಕೇಬಲ್ ಅಳವಡಿಸುತ್ತಿರುವ ಕಾಮಗಾರಿ ಪ್ರಗತಿಯಲ್ಲಿದ್ದು, ರಸ್ತೆ ಗುಂಡಿಗಳು ನಿರ್ಮಾಣವಾಗುತ್ತಿರುತ್ತವೆ. ಸದರಿ ಗುಂಡಿಗಳನ್ನು ಈಗಾಗಲೇ ಮುಚ್ಚಿದರು ಸಹ ಮಳೆ ನೀರು ಹರಿದು ಸದರಿ ಗುಂಡಿಗಳಲ್ಲಿನ ಮಣ್ಣು ಶ್ರಿಂಕ್ ಆಗಿ ಮತ್ತೆ ಗುಂಡಿ ನಿರ್ಮಾಣವಾಗುತ್ತಿದ್ದು, ಸದರಿ ಗುಂಡಿಗಳನ್ನು ಮತ್ತೊಂದು ಸಾರಿ ಪರಿಶೀಲಿಸಿ ಮತ್ತೆ ಗುಂಡಿಗಳನ್ನು ಮುಚ್ಚಲು ಕ್ರಮ ವಹಿಸಬೇಕಾಗಿ ಬೆಸ್ಕಾಂ ಗುತ್ತಿಗೆದಾರರುಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು. ಸಭೆಗೆ ಬೆಸ್ಕಾಂ ಅಧಿಕಾರಿಗಳು ಹಾಜರಾಗದಿರುವ ಬಗ್ಗೆ ವಿಷಾದ ವ್ಯಕ್ತ ಪಡಿಸಿ ಮುಂದಿನ ಸಭೆಗೆ ಕಡ್ಡಾಯವಾಗಿ ಹಾಜರಿರುವಂತೆ ಸೂಚಿಸಿದರು.

ವಾರ್ಡ್‌ನ ಅಧ್ಯಕ್ಷಕರು ಮಾತನಾಡುತ್ತಾ ಈ ಮೇಲಿನ ಎಲ್ಲಾ ಅಂಶಗಳನ್ನು ಕೂಡಲೇ ಬಗೆಹರಿಸುವಂತೆ ವಾರ್ಡ್ ಕಾರ್ಯದರ್ಶಿಗಳಿಗೆ ತಿಳಿಸುತ್ತಾ ಮತ್ತು ಸಭೆಯಲ್ಲಿ ಹಾಜರಿದ್ದ ಎಲ್ಲಾ ಸಾರ್ವಜನಿಕರಿಗೆ ವಂದನೆಗಳನ್ನು ತಿಳಿಸುತ್ತಾ ಈ ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸದಸ್ಯ ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-67(ಹಳೆಯ ಸಂಖ್ಯೆ-19),
ಸಂಜಯನಗರ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್-67(ಹಳೆಯ ಸಂಖ್ಯೆ-19),
ಸಂಜಯನಗರ

**ಪ್ರತಿಯನ್ನು:-**

1. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
3. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
4. ಕಛೇರಿ ಪ್ರತಿ.

Scanned with CamScanner